54

# ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಎಸಿಎ-3/JICM/ಸಂ.ನ/2025-26

ಜ್ಞಾನಭಾರತಿ
ಬೆಂಗಳೂರು-560 056
**ದಿನಾಂಕ: 30 .07.2025**

## ಅಧಿಸೂಚನೆ

**ವಿಷಯ** : **2025-26ನೇ** ಶೈಕ್ಷಣಿಕ ಸಾಲಿಗೆ ಸಂಯೋಜನೆ ನವೀಕರಿಸುವ ಬಗೆಗೆ.

**ಉಲ್ಲೇಖ:** 1. ವಿ.ವಿ. ಅಧಿಸೂಚನೆ ಸಂಖ್ಯೆ: ಎಸಿಎ-3:ಸಂ.ನ: 2025-26, ದಿ: 24.10.2024.
2. ಕುಲಪತಿಯವರ ಅನುಮೋದನೆ ದಿನಾಂಕ: 28.07.2025.

*****

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 17ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ, ಬೆಂಗಳೂರು ವಿಶ್ವವಿದ್ಯಾಲಯವು 2025-26ನೇ ಸಾಲಿಗೆ **ಜ್ಯೋತಿ ಇನ್ಸ್‌ಟಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್‌ಮೆಂಟ್** ನಡೆಸುತ್ತಿರುವ ಕೆಳಕಂಡ ಕೋರ್ಸಿಗೆ/ಕೋರ್ಸುಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಸಂಯೋಜನೆಯನ್ನು ನವೀಕರಿಸಿ ಮುಂದುವರಿಸಿದೆ.

| ಕೋರ್ಸ್ *(Programme)* | ವಿಷಯವಾರು *(Subject / Combination)* | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ.ಬಿ.ಎ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 60 (ಅರವತ್ತು) |
| ಬಿ.ಕಾಂ. | | 200 (ಇನ್ನೂರು) |
| ಬಿ.ಸಿ.ಎ. | ಕಂಪ್ಯೂಟರ್ ಅಪ್ಲಿಕೇಷನ್ಸ್ | 60 (ಅರವತ್ತು) |
| ಎಂ.ಕಾಂ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 40 (ನಲವತ್ತು) |

***ವಿ.ಸೂ:*** ***2025-26ನೇ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಲಗತ್ತಿಸಿದೆ. ಕಾಲೇಜುಗಳಿಗೆ ಸಿಂಡಿಕೇಟ್ ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದೊಂದಿಗೆ ಮಾತ್ರ ಸಂಯೋಜನೆಯನ್ನು ನವೀಕರಿಸಲಾಗಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಿರುವ ಕೊರತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಹಾಗೂ ನ್ಯೂನ್ಯತೆಗಳನ್ನು ಸರಿಪಡಿಸಿಕೊಂಡಿರುವ ಕುರಿತು ಅನುಸರಣಾ ವರದಿಯನ್ನು ನೀಡತಕ್ಕದ್ದು. ಇಲ್ಲವಾದಲ್ಲಿ, ಮುಂದಿನ ಶೈಕ್ಷಣಿಕ ವರ್ಷದ ಸಂಯೋಜನಾ ನವೀಕರಣದ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ.***

**ಷರತ್ತುಗಳು:**

1. *ಸ್ಥಳೀಯ ವಿಚಾರಣಾ ಸಮಿತಿಯು ನಮೂದಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು.*
2. *ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್ಇ 2021 ದಿನಾಂಕ: 12-02-2021ರಲ್ಲಿ ಸೂಚಿಸಿರುವಂತೆ ಕಾಲೇಜುಗಳು ಮುಂದಿನ ಆರು ತಿಂಗಳೊಳಗಾಗಿ ಸ್ಥಳೀಯ ವಿಚಾರಣ ಸಮಿತಿಯ ವರದಿಯಲ್ಲಿ ನಮೂದಿಸಲಾಗಿರುವ ಎಲ್ಲಾ ಎಂಟು Defined Parameters ಗಳನ್ನು ಪೂರೈಸಲು ಕ್ರಮವಹಿಸತಕ್ಕದ್ದು.*
3. *ಸರ್ಕಾರವು ನಿರ್ದೇಶಿಸಿರುವಂತೆ ಸಂಯೋಜಿತ ಕೋರ್ಸುಗಳಿಗೆ ಕಡ್ಡಾಯವಾಗಿ ಸರ್ಕಾರದ UUCMS ಪೋರ್ಟಲ್ ಮೂಲಕವೇ ಪ್ರವೇಶಾತಿಯನ್ನು ಮಾಡತಕ್ಕದ್ದು.*

4. ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದ್ದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾಲಯ ಅಂಗೀಕಾರ ನೀಡುವುದಿಲ್ಲ.

5. ಯಾವುದೇ ಕೋರ್ಸಿಗೆ/ಕೋರ್ಸುಗಳಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.

6. ಸದರಿ ಪದವಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

7. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.

8. ಸ್ನಾತಕೋತ್ತರ ಪದವಿ ಕೋರ್ಸುಗಳಿಗೆ ವಿಶ್ವವಿದ್ಯಾಲಯ ಕಾಲಕಾಲಕ್ಕೆ ನಿಗಧಿಪಡಿಸುವ ಪ್ರವೇಶ ಮತ್ತು ಇತರೆ ಶುಲ್ಕಗಳನ್ನು ಮೀರದಂತೆ, ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದ ಶೇಕಡಾ 50ರಂತೆ (ಸರ್ಕಾರಿ ಕಾಲೇಜುಗಳಿಗೆ ಶೇಕಡಾ 100ರಂತೆ) ವಿಶ್ವವಿದ್ಯಾಲಯವು ಪ್ರಾಯೋಜಿಸುವ ವಿದ್ಯಾರ್ಥಿಗಳಿಂದ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.

9. ವೈಶಾಕ v/s ರಾಜಸ್ಥಾನದ ರಾಜ್ಯ ಸರ್ಕಾರದ ವ್ಯಾಜ್ಯಕ್ಕೆ ಸಂಬಂಧಿಸಿದಂತೆ, ದಿನಾಂಕ: 13-8-1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ (ಬೋಧಕ/ಬೋಧಕೇತರ/ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚುಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ವಿದ್ಯಾರ್ಥಿ ದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾಧಗಳನ್ನು/ಚಟುವಟಿಕೆಗಳನ್ನು ಮಟ್ಟ ಹಾಕಲು ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.

10. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಕಾಲೇಜು ಕೋರ್ಸುಗಳ ಶಿಕ್ಷಣ ಕ್ರಮವನ್ನು ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಬೋಧಕರುಗಳನ್ನು ಪ್ರಾಂಶುಪಾಲರು/ ಆಡಳಿತ ಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.

11. ವಿದ್ಯಾರ್ಥಿಗಳು ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.

12. ಕಾಲೇಜು ವಿದ್ಯಾರ್ಥಿಗಳ ಅಂಕಪಟ್ಟಿ, ಪದವಿ ಪ್ರಮಾಣ ಪತ್ರ ಹಾಗೂ ಇತರೆ ದಾಖಲೆಗಳನ್ನು ಮೂರು ತಿಂಗಳ ಅವಧಿಯೊಳಗೆ ವಿದ್ಯಾರ್ಥಿಗಳಿಗೆ ನೀಡಬೇಕು. ಅವಧಿ ಮೀರಿದ ನಂತರ ತಮ್ಮಲ್ಲಿಯೇ ಉಳಿದುಕೊಂಡಿರುವ ಅಂಕಪಟ್ಟಿಗಳು ಮತ್ತು ಪದವಿ ಪ್ರಮಾಣ ಪತ್ರಗಳ ಬಗ್ಗೆ ಕುಲಸಚಿವರು (ಮೌಲ್ಯಮಾಪನ) ಇವರಿಗೆ ವರದಿ ನೀಡತಕ್ಕದ್ದು.

13. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರ್‌ನ ಪೂರ್ಣವಾಗದ ಅವಧಿಯ ಬೋಧನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.

14. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

15. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.

16. 2026-27ನೇ ಸಾಲಿಗೆ ಕೋರ್ಸುಗಳ ಸಂಯೋಜನಾ ನವೀಕರಣಕ್ಕೆ ಕಾಲೇಜು ತಪ್ಪದೆ ಅರ್ಜಿಯನ್ನು ಸಲ್ಲಿಸತಕ್ಕದ್ದು.

17. ಐದು ವರ್ಷಗಳನ್ನು ಪೂರೈಸಿರುವ ಕಾಲೇಜುಗಳು ನ್ಯಾಕ್ (NAAC) ಅನುಮೋದನೆಯನ್ನು ಕೂಡಲೇ ಪಡೆದುಕೊಳ್ಳತಕ್ಕದ್ದು.

18. ಕಾಲೇಜಿನಲ್ಲಿ ಅರ್ಹತೆಯುಳ್ಳ ಗ್ರಂಥಪಾಲಕರು ಹಾಗೂ ದೈಹಿಕ ಶಿಕ್ಷಣ ನಿರ್ದೇಶಕರನ್ನು ನೇಮಿಸದಿದ್ದಲ್ಲಿ, ಕಡ್ಡಾಯವಾಗಿ ನೇಮಿಸತಕ್ಕದ್ದು.

19. ಕಾಲೇಜಿನಲ್ಲಿ ಸಂವಿಧಾನ ಪೀಠಿಕೆಯನ್ನು ಕಡ್ಡಾಯವಾಗಿ ಪ್ರದರ್ಶಿಸತಕ್ಕದ್ದು.

20. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಅಧ್ಯಯನ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ತಪ್ಪಿದ್ದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

ಆದೇಶದ ಮೇರೆಗೆ

30/7/25

ಕುಲಸಚಿವರು

ಗೆ,

**ಪ್ರಾಂಶುಪಾಲರು,**
**ಜ್ಯೋತಿ ಇನ್‌ಸ್ಟಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್‌ಮೆಂಟ್,**
**ನಂ.40/5, ತಾತಗುಣಿ ಕನಕಪುರ ರಸ್ತೆ,**
**ಬೆಂಗಳೂರು – 560 008**
**UUCMS ID:P20GFJ0124.**

**ಪ್ರತಿಗಳು:**

1. ಸರ್ಕಾರದ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ(ವಿಶ್ವವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು–560001.
2. ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು–560056.
3. ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು–560056.
4. ಉಪಕುಲಸಚಿವರು/ಸಹಾಯಕ ಕುಲಸಚಿವರು/ಅಧೀಕ್ಷಕರು ಶೈಕ್ಷಣಿಕ ವಿಭಾಗ–1/4. ಬೆಂ.ವಿ.ವಿ. ಬೆಂಗಳೂರು–560056.
5. ಅಧೀಕ್ಷಕರು, ಕಾನ್ಫಿಡೆನ್ಷಿಯಲ್ ವಿಭಾಗ, ಪರೀಕ್ಷಾ ವಿಭಾಗ, ಬೆಂ.ವಿ.ವಿ., ಬೆಂಗಳೂರು–560056.
6. ಐ.ಟಿ. ಕೋಆರ್ಡಿನೇಟರ್, ಯು.ಯು.ಸಿ.ಎಂ.ಎಸ್., ಬೆಂ.ವಿ.ವಿ., ಬೆಂಗಳೂರು–560056.
7. ಸಹಾಯಕ ನಿರ್ದೇಶಕರು, ಅಂಕಿ ಅಂಶಗಳ ವಿಭಾಗ, ಬೆಂ.ವಿ.ವಿ., ಬೆಂಗಳೂರು–560056.

# ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಎಸಿಎ-3/ಎ3/ಎಂ.ಬಿ.ಎ./ಎಂ.ಸಿ.ಎ./ಸಂ.ನ.2025-26

ಜ್ಞಾನಭಾರತಿ,
ಬೆಂಗಳೂರು-560056
ದಿನಾಂಕ:06.12.2025

## ಅಧಿಸೂಚನೆ

ವಿಷಯ: 2025-26ನೇ ಶೈಕ್ಷಣಿಕ ಸಾಲಿಗೆ ಎಂ.ಬಿ.ಎ. ಮತ್ತು ಎಂ.ಸಿ.ಎ. ಕೋರ್ಸುಗಳಿಗೆ ಸಂಯೋಜನೆ ನವೀಕರಿಸುವ ಬಗೆಗೆ.

ಉಲ್ಲೇಖ: ಕುಲಪತಿಯವರ ಅನುಮೋದನೆ ದಿನಾಂಕ : 06.12.2025

*****

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 17 ಮತ್ತು 18ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ, ಬೆಂಗಳೂರು ವಿಶ್ವವಿದ್ಯಾಲಯವು ಈ ಕೆಳಗೆ ನಮೂದಿಸಿರುವ ಕಾಲೇಜುಗಳಿಗೆ ಅವುಗಳಲ್ಲಿ ಅಸ್ತಿತ್ವದಲ್ಲಿರುವ ಎಂ.ಬಿ.ಎ. ಮತ್ತು ಎಂ.ಸಿ.ಎ. ಕೋರ್ಸುಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು, 2025-26ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆಯನ್ನು ನವೀಕರಿಸಿ, ಮುಂದುವರಿಸಿದೆ.

| ಕ್ರಮ ಸಂಖ್ಯೆ | ಕಾಲೇಜಿನ ಹೆಸರು ಮತ್ತು ವಿಳಾಸ | ಕೋರ್ಸು | ವಿದ್ಯಾರ್ಥಿ ಪ್ರಮಾಣ |
|---|---|---|---|
| 1. | ಆಚಾರ್ಯ ಇನ್ಸ್‌ಟಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್ ಅಂಡ್ ಸೈನ್ಸ್, 1ನೇ ಅಡ್ಡರಸ್ತೆ, 1ನೇ ಹಂತ, ಪೀಣ್ಯ ಕೈಗಾರಿಕಾ ನಗರ, ಬೆಂಗಳೂರು-58 | ಎಂ.ಬಿ.ಎ. | 240 (ಇನ್ನೂರ ನಲವತ್ತು) |
| | | ಎಂ.ಸಿ.ಎ. | 60 (ಅರವತ್ತು) |
| 2. | ಎ.ಎಂ.ಸಿ. ಕಾಲೇಜು 18ನೇ ಕಿ.ಮೀ., ಬನ್ನೇರುಘಟ್ಟ ರಸ್ತೆ, ಬೆಂಗಳೂರು-83 | ಎಂ.ಬಿ.ಎ. | 240 (ಇನ್ನೂರ ನಲವತ್ತು) |
| | | ಎಂ.ಸಿ.ಎ. | 180 (ನೂರ ಎಂಭತ್ತು) |
| 3. | ಎ.ಐ.ಎಂ.ಎಸ್. ಐ.ಬಿ.ಎಸ್. ಬ್ಯುಸಿನೆಸ್ ಸ್ಕೂಲ್, (ಆಕ್ಲೀವ್ ಇನ್ಸ್‌ಟಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್ ಸ್ಟಡೀಸ್ ಇಂಟರ್ ನ್ಯಾಷನಲ್ ಬ್ಯುಸಿನೆಸ್ ಸ್ಕೂಲ್), ನಂ.235-ಇ1, ಬೊಮ್ಮಸಂದ್ರ ಇಂಡಸ್ಟ್ರಿಯಲ್ ಏರಿಯಾ, 3ನೇ ಫೇಸ್, ಹೊಸೂರು ರಸ್ತೆ, ಬೆಂಗಳೂರು-560099 | ಎಂ.ಬಿ.ಎ. | 180 (ನೂರ ಎಂಭತ್ತು) |
| 4. | ಕ್ರೈಸ್ಟ್ ಅಕಾಡೆಮಿ ಇನ್ಸ್‌ಟಿಟ್ಯೂಟ್ ಫಾರ್ ಅಡ್ವಾನ್ಸ್ಡ್ ಸ್ಟಡೀಸ್, ಕ್ರೈಸ್ಟ್ ನಗರ, ಹುಲ್ಲಹಳ್ಳಿ, ಬೇಗೂರು:ಕೊಪ್ಪ ರಸ್ತೆ, ಸಕ್ಲವಾರ ಅಂಚೆ, ಬೆಂಗಳೂರು -560083 | ಎಂ.ಬಿ.ಎ. | 120 (ನೂರ ಇಪ್ಪತ್ತು) |
| | | ಎಂ.ಸಿ.ಎ. | 60 (ಅರವತ್ತು) |
| 5. | ಸಿಟಿ ಕಾಲೇಜು, 27/2, 33ನೇ ಅಡ್ಡರಸ್ತೆ, 2ನೇ ಮುಖ್ಯರಸ್ತೆ, 7ನೇ ಬ್ಲಾಕ್, ಜಯನಗರ, ಬೆಂಗಳೂರು-52 | ಎಂ.ಬಿ.ಎ. | 300 (ಮುನ್ನೂರು) |
| | | ಎಂ.ಸಿ.ಎ. | 180 (ನೂರ ಎಂಭತ್ತು) |
| 6. | ದಯಾನಂದ ಸಾಗರ್ ಕಲೆ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು, ಶ್ಯಾವಿಗೆ ಮಲ್ಲೇಶ್ವರ ಹಿಲ್ಸ್, ಕುಮಾರಸ್ವಾಮಿ ಬಡಾವಣೆ, ಬೆಂಗಳೂರು-78 | ಎಂ.ಬಿ.ಎ. | 240 (ಇನ್ನೂರ ನಲವತ್ತು) |
| | | ಎಂ.ಸಿ.ಎ. | 120 (ನೂರ ಇಪ್ಪತ್ತು) |

| | | | |
|---|---|---|---|
| 7. | ಧನ್ವಂತರಿ ಅಕಾಡೆಮಿ ಫಾರ್ ಮ್ಯಾನೇಜ್ಮೆಂಟ್ ಸ್ಟಡೀಸ್,<br>ಸರ್ವೇ ನಂ.39/1, ವಿನಾಯಕ ನಗರ,<br>ಚಿಕ್ಕ ಬಾಣಾವರ ರೈಲ್ವೇ ಸ್ಟೇಷನ್,<br>ಹೆಸರುಘಟ್ಟ ರಸ್ತೆ, ಚಿಕ್ಕ ಬಾಣಾವರ,<br>ಬೆಂಗಳೂರು - 560090 | ಎಂ.ಬಿ.ಎ. | 180 (ನೂರ ಎಂಭತ್ತು) |
| | | ಎಂ.ಸಿ.ಎ. | 180 (ನೂರ ಎಂಭತ್ತು) |
| 8. | ಡಾನ್ ಬಾಸ್ಕೋ ಇನ್ಸ್‌ಟಿಟ್ಯೂಟ್ ಆಫ್ ಬಯೋ ಸೈನ್ಸ್ ಅಂಡ್ ಮ್ಯಾನೇಜ್‌ಮೆಂಟ್ ಸ್ಟಡೀಸ್,<br>ಕುಂಬಳಗೋಡು, ಮೈಸೂರು ರಸ್ತೆ,<br>ಬೆಂಗಳೂರು-560074 | ಎಂ.ಬಿ.ಎ. | 120 (ನೂರ ಇಪ್ಪತ್ತು) |
| 9. | ಈಸ್ಟ್ ವೆಸ್ಟ್ ಕಾಲೇಜ್ ಆಫ್ ಮ್ಯಾನೇಜ್‌ಮೆಂಟ್,<br>ನಂ.63, ವಿಶ್ವನೀಡಂ ಅಂಚೆ, ಮಾಗಡಿ ರಸ್ತೆ,<br>ಬೆಂಗಳೂರು-91 | ಎಂ.ಬಿ.ಎ. | 150 (ನೂರ ಐವತ್ತು) |
| | | ಎಂ.ಸಿ.ಎ. | 120 (ನೂರ ಇಪ್ಪತ್ತು) |
| 10. | ಜಿ. ಟಿ. ಇನ್ಸ್‌ಟಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್ ಸ್ಟಡೀಸ್ ಅಂಡ್ ರಿಸರ್ಚ್,<br>ನಂ.10/15, ಮಾಗಡಿ ರಸ್ತೆ, ಸುಂಕದಕಟ್ಟೆ,<br>ವಿಶ್ವನೀಡಂ ಅಂಚೆ, ಬೆಂಗಳೂರು-91 | ಎಂ.ಬಿ.ಎ. | 120 (ನೂರ ಇಪ್ಪತ್ತು) |
| | | ಎಂ.ಸಿ.ಎ. | 60 (ಅರವತ್ತು) |
| 11. | ಗ್ಲೋಬಲ್ ಇನ್ಸ್‌ಟಿಟ್ಯೂಟ್ ಆಫ್<br>ಮ್ಯಾನೇಜ್‌ಮೆಂಟ್ ಅಂಡ್ ಸೈನ್ಸ್,<br>ನಂ.6, 3ನೇ ಅಡ್ಡರಸ್ತೆ, 'ಡಿ' ರಸ್ತೆ,<br>ಐಡಿಯಲ್ ಹೋಮ್ ಟೌನ್‌ಶಿಪ್, 2ನೇ ಫೇಸ್,<br>ರಾಜರಾಜೇಶ್ವರಿನಗರ, ಬೆಂಗಳೂರು-560098 | ಎಂ.ಬಿ.ಎ. | 120 (ನೂರ ಇಪ್ಪತ್ತು) |
| | | ಎಂ.ಸಿ.ಎ. | 120 (ನೂರ ಇಪ್ಪತ್ತು) |
| 12. | ಹರ್ಷ ಇನ್ಸ್‌ಟಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್ ಸ್ಟಡೀಸ್, ನಂ.129/47/1-7, ವರದನಾಯಕನಹಳ್ಳಿ,<br>ತ್ಯಾಮಗೊಂಡ್ಲು ಹೋಬಳಿ,<br>ನೆಲಮಂಗಲ ತಾಲ್ಲೂಕು,<br>ಬೆಂಗಳೂರು ಗ್ರಾಮಾಂತರ ಜಿಲ್ಲೆ-562123 | ಎಂ.ಬಿ.ಎ. | 180 (ನೂರ ಎಂಭತ್ತು) |
| | | ಎಂ.ಸಿ.ಎ. | 120 (ನೂರ ಇಪ್ಪತ್ತು) |
| 13. | ಹಿಲ್‌ಸೈಡ್ ಇನ್ಸ್‌ಟಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್,<br>ನಂ.9, ರಘುವನಹಳ್ಳಿ, ಕನಕಪುರ ಮುಖ್ಯರಸ್ತೆ,<br>ಬೆಂಗಳೂರು-560062 | ಎಂ.ಬಿ.ಎ. | 60 (ಅರವತ್ತು) |
| 14. | ಇಂಪೀರಿಯಲ್ ಇನ್ಸ್‌ಟಿಟ್ಯೂಟ್ ಆಫ್ ಅಡ್ವಾನ್ಸ್ಡ್ ಮ್ಯಾನೇಜ್ಮೆಂಟ್,<br>ನಂ.501, ಸರ್ವೇ ನಂ.224-2, 226-2, ಸಾಲು ಹುಣಿಸೆ<br>ಉದಯಪುರ ಅಂಚೆ, ಕನಕಪುರ ಮುಖ್ಯರಸ್ತೆ,<br>ಕಗ್ಗಲಿಪುರ ಹತ್ತಿರ, ಬೆಂಗಳೂರು-82 | ಎಂ.ಬಿ.ಎ. | 120 (ನೂರ ಇಪ್ಪತ್ತು) |
| 15. | ಇಂಟರ್‌ನ್ಯಾಷನಲ್ ಅಕಾಡೆಮಿ ಆಫ್<br>ಮ್ಯಾನೇಜ್ಮೆಂಟ್ ಅಂಡ್ ಎಂಟರ್‌ಪ್ರುನರ್‌ಶಿಪ್,<br>ನಂ.152/2, ನಿಸರ್ಗ ಕ್ಯಾಂಪಸ್,<br>ಆರ್ಟ್ ಆಫ್ ಲಿವಿಂಗ್ ಹಿಂಭಾಗ, ಕನಕಪುರ ರಸ್ತೆ,<br>ಉದಯಪುರ ಅಂಚೆ, ಬೆಂಗಳೂರು-560082 | ಎಂ.ಬಿ.ಎ. | 120 (ನೂರ ಇಪ್ಪತ್ತು) |
| 16. | ಐ.ಎಸ್.ಬಿ.ಆರ್. ಕಾಲೇಜು,<br>ನಂ.60, ಫೇಸ್-1, ಎಲೆಕ್ಟ್ರಾನಿಕ್ ಸಿಟಿ,<br>ಬೆಂಗಳೂರು-560100 | ಎಂ.ಬಿ.ಎ. | 240 (ಇನ್ನೂರ ನಲವತ್ತು) |
| 17. | ಎನ್.ಎಸ್.ಬಿ. ಅಕಾಡೆಮಿ,<br>ಸರ್ವೇ ನಂ.85, ಸಿಂಗೇನ ಅಗ್ರಹಾರ,<br>ಹುಸ್ಕೂರು ಅಂಚೆ, ಆನೇಕಲ್ಲು ತಾಲ್ಲೂಕು,<br>ಬೆಂಗಳೂರು-560099 | ಎಂ.ಬಿ.ಎ. | 300 (ಮುನ್ನೂರು) |

| | | | |
|---|---|---|---|
| 18. | ಆರ್. ಆರ್. ಇನ್ಸ್‌ಟಿಟ್ಯೂಟ್ ಆಫ್ ಅಡ್ವಾನ್ಸ್ಡ್ ಸ್ಟಡೀಸ್,<br>ಚಿಕ್ಕಬಾಣಾವರ, ಹೆಸರುಘಟ್ಟ ರಸ್ತೆ,<br>ಬೆಂಗಳೂರು-560090 | ಎಂ.ಬಿ.ಎ. | 120 (ನೂರ ಇಪ್ಪತ್ತು) |
| 19. | ಎಸ್. ವಿ. ಆರ್. ಕಾಲೇಜ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್ ಸ್ಟಡೀಸ್,<br>ನಂ.20/1, ಸಮಸಂದ್ರ ಪಾಳ್ಯ,<br>ಹೆಚ್‌ಎಸ್‌ಆರ್ ಸೆಕ್ಟರ್-2, ಬೆಂಗಳೂರು-560034 | ಎಂ.ಬಿ.ಎ. | 120 (ನೂರ ಇಪ್ಪತ್ತು) |
| 20. | ಬಿ. ಜಿ. ಎಸ್. ಬಿ ಸ್ಕೂಲ್,<br>ನಂ.67, ಬಿಜಿಎಸ್ ಹೆಲ್ತ್ ಅಂಡ್ ಎಜುಕೇಷನ್ ಸಿಟಿ,<br>ಕೆಂಗೇರಿ, ಬೆಂಗಳೂರು – 560 060 | ಎಂ.ಬಿ.ಎ. | 60 (ಅರವತ್ತು) |
| 21. | ಸೌಂದರ್ಯ ಇನ್ಸ್‌ಟಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್ ಅಂಡ್ ಸೈನ್ಸ್,<br>ಸೌಂದರ್ಯನಗರ, ಸಿಡೇದಹಳ್ಳಿ,<br>ನಾಗಸಂದ್ರ ಅಂಚೆ, ಬೆಂಗಳೂರು-560073.<br>*ಸರ್ಕಾರದ ಆದೇಶ ಸಂ.ಇಡಿ 424 ಯುಬಿವಿ 2024, ಬೆಂಗಳೂರು, ದಿನಾಂಕ 22.11.2024. | ಎಂ.ಬಿ.ಎ. | 240 (ಇನ್ನೂರ ನಲವತ್ತು) |
| | | ಎಂ.ಸಿ.ಎ. | 60 (ಅರವತ್ತು) |
| 22. | ಟಿ. ಜಾನ್ ಇನ್ಸ್‌ಟಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್ ಅಂಡ್ ಸೈನ್ಸ್,<br>ನಂ.86/3, ಕಮ್ಮನಹಳ್ಳಿ, ಗೊಟ್ಟಿಗೆರೆ ಅಂಚೆ,<br>ಬನ್ನೇರುಘಟ್ಟ ರಸ್ತೆ, ಬೆಂಗಳೂರು-83 | ಎಂ.ಬಿ.ಎ. | 120 (ನೂರ ಇಪ್ಪತ್ತು) |
| 23. | ಬಿ. ಟಿ. ಎಲ್. ಕಾಲೇಜು,<br>ನಂ.259(ಬಿ), ಬೊಮ್ಮಸಂದ್ರ ಕೈಗಾರಿಕಾ ಪ್ರದೇಶ,<br>ಹೊಸೂರು ರಸ್ತೆ, ಬೆಂಗಳೂರು-560 099. | ಎಂ.ಬಿ.ಎ. | 120 (ನೂರ ಇಪ್ಪತ್ತು) |
| 24. | ಬೆಂಗಳೂರು ಇಂಟಿಗ್ರೇಟೆಡ್ ಮ್ಯಾನೇಜ್ಮೆಂಟ್ ಅಕಾಡೆಮಿ,<br>ನಂ.77/1, ಮೈಸೂರು ರಸ್ತೆ, ಹೊಲಗೇರಿ ಹಳ್ಳಿ,<br>ಪಟ್ಟಣಗೆರೆ, ಮೆಟ್ರೋ ನಿಲ್ದಾಣದ ಹತ್ತಿರ,<br>ಬೆಂಗಳೂರು-59 | ಎಂ.ಬಿ.ಎ. | 240 (ಇನ್ನೂರ ನಲವತ್ತು) |
| | | ಎಂ.ಸಿ.ಎ. | 120 (ನೂರ ಇಪ್ಪತ್ತು) |
| 25. | ವಾಸವಿ ಜ್ಞಾನಪೀಠ ಪ್ರಥಮ ದರ್ಜೆ ಕಾಲೇಜು,<br>ನಂ.10, 2ನೇ ಮುಖ್ಯರಸ್ತೆ, ವಿಜಯನಗರ,<br>ಬೆಂಗಳೂರು-40 | ಎಂ.ಬಿ.ಎ. | 120 (ನೂರ ಇಪ್ಪತ್ತು) |
| | | ಎಂ.ಸಿ.ಎ. | 120 (ನೂರ ಇಪ್ಪತ್ತು) |
| 26. | ವಿದ್ಯಾ ಶೇಖರ್ ಇನ್ಸ್‌ಟಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್ ಸ್ಟಡೀಸ್,<br>ಸರ್ವೆ ನಂ.204, ಖಾತಾ ಸಂಖ್ಯೆ 6161,<br>ಇಂದಿರಾನಗರ, ನೆಲಮಂಗಲ,<br>ರಾಷ್ಟ್ರೀಯ ಹೆದ್ದಾರಿ-4, ಬೆಂಗಳೂರು-562123 | ಎಂ.ಬಿ.ಎ. | 180 (ನೂರ ಎಂಭತ್ತು) |
| | | ಎಂ.ಸಿ.ಎ. | 120 (ನೂರ ಇಪ್ಪತ್ತು) |
| 27. | ಐ.ಎಸ್.ಎಂ.ಇ. (ಇಂಟರ್ ನ್ಯಾಷನಲ್ ಸ್ಕೂಲ್ ಆಫ್ ಮ್ಯಾನೇಜ್ಮೆಂಟ್ ಎಕ್ಸಲೆನ್ಸ್),<br>ಸರ್ವೆ ನಂ. 89/88, ಚಂಬೇನಹಳ್ಳಿ,<br>ಸರ್ಜಾಪುರ ಹೋಬಳಿ, ಆನೇಕಲ್ಲು ತಾಲ್ಲೂಕು,<br>ಬೆಂಗಳೂರು ನಗರ-562125 | ಎಂ.ಸಿ.ಎ. | 60 (ಅರವತ್ತು) |
| 28. | ಐ.ಜೆಡ್.ಇ.ಇ.,<br>ಫ್ಲಾಟ್ 325, ಭಾಗ-ಎ, ಬೊಮ್ಮಸಂದ್ರ, ಜಿಗಣಿ ರಸ್ತೆ,<br>ಜಿಗಣಿ ಇಂಡಸ್ಟ್ರಿಯಲ್ ಏರಿಯಾ, ಜಿಗಣಿ ಅಂಚೆ,<br>ಆನೇಕಲ್ಲು ತಾಲ್ಲೂಕು, ಬೆಂಗಳೂರು-560105 | ಎಂ.ಬಿ.ಎ. | 240 (ಇನ್ನೂರ ನಲವತ್ತು) |

| | | | |
|---|---|---|---|
| 29. | ಜ್ಯೋತಿ ಇನ್ಸ್‌ಟಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್<br>ನಂ.40-5, ತಾತಾಗುಣಿ ಆಫ್ ಕನಕಪುರ ರಸ್ತೆ,<br>ಬೆಂಗಳೂರು – 560 082. | ಎಂ.ಬಿ.ಎ. | 60 (ಅರವತ್ತು) |

**ಷರತ್ತುಗಳು:**

1) ಪ್ರತೀ ಶೈಕ್ಷಣಿಕ ವರ್ಷದ ಎಐಸಿಟಿಇ ಯ ವಿಸ್ತರಣಾ ಅನುಮೋದನೆಯನ್ನು ಕಡ್ಡಾಯವಾಗಿ ಪಡೆದು ಕೊಳ್ಳತಕ್ಕದ್ದು.
2) ಎಐಸಿಟಿಇ, ನವದೆಹಲಿ, ಕರ್ನಾಟಕ ಸರ್ಕಾರ ಹಾಗೂ ಬೆಂಗಳೂರು ವಿಶ್ವವಿದ್ಯಾಲಯ ವಿಧಿಸಿರುವ/ ವಿಧಿಸುವ ಷರತ್ತು ನಿಬಂಧನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
3) ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾಲಯವು ಅಂಗೀಕಾರ ನೀಡುವುದಿಲ್ಲ.
4) ಯಾವುದೇ ಕೋರ್ಸಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿ ಇಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.
5) ಕೋರ್ಸಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಕರ್ನಾಟಕ ಎಂ.ಬಿ.ಎ. ಮತ್ತು ಎಂ.ಸಿ.ಎ. ಕೋರ್ಸುಗಳ ಅಭ್ಯರ್ಥಿಗಳ ಆಯ್ಕೆ ನಿಯಮಗಳನ್ವಯ ಮಾತ್ರ ಪಡೆಯತಕ್ಕದ್ದು.
6) 2025-26ನೇ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಲಗತ್ತಿಸಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಿರುವ ಕೊರತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಹಾಗೂ ನ್ಯೂನ್ಯತೆಗಳನ್ನು ಸರಿಪಡಿಸಿ ಕೊಂಡಿರುವ ಕುರಿತು ಅನುಸರಣಾ ವರದಿಯನ್ನು ನೀಡತಕ್ಕದ್ದು.
7) ವಿದ್ಯಾರ್ಥಿ ಪ್ರಮಾಣದ ನಿಗಧಿಯನ್ನೊಳಗೊಂಡಂತೆ ಸಂಯೋಜನೆಯ ಬಗ್ಗೆ ಸರ್ಕಾರವು ವಿಧಿಸಿರುವ ಎಲ್ಲಾ ಷರತ್ತುಗಳನ್ನು ಕಟ್ಟುನಿಟ್ಟಾಗಿ ತಪ್ಪದೇ ನಿಗಧಿತ ಅವಧಿಯೊಳಗೆ ಪೂರೈಸತಕ್ಕದ್ದು.
8) ಸರ್ಕಾರದ ಆದೇಶ ಸಂಖ್ಯೆ ಇಡಿ 29 ಯುಎಸ್ಇ 2021, ದಿನಾಂಕ 12.02.2021 ರಲ್ಲಿ ಸೂಚಿಸಿರುವಂತೆ ಕಾಲೇಜುಗಳು ಮುಂದಿನ ಆರು ತಿಂಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಲಾಗಿರುವ ಎಲ್ಲಾ ಎಂಟು Defined Parameters ಗಳನ್ನು ಪೂರೈಸಲು ಕ್ರಮ ವಹಿಸತಕ್ಕದ್ದು.
9) ಸರ್ಕಾರವು ನಿರ್ದೇಶಿಸಿರುವಂತೆ ಸಂಯೋಜಿತ ಕೋರ್ಸುಗಳಿಗೆ ಕಡ್ಡಾಯವಾಗಿ ಸರ್ಕಾರದ UUCMS ಪೋರ್ಟಲ್ ಮೂಲಕವೇ ಪ್ರವೇಶಾತಿಯನ್ನು ಮಾಡತಕ್ಕದ್ದು.
10) ಕಾಲೇಜು/ಆಡಳಿತ ಮಂಡಳಿ ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯ ವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗಧಿಪಡಿಸತಕ್ಕದ್ದು. ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗಧಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು. ವಿಶ್ವವಿದ್ಯಾಲಯವು ನಿಗಧಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.
11) ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವ ವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸ ದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು. ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರಿ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿ ಕೊಂಡಲ್ಲಿ ಸಂಯೋಜನೆಯನ್ನು ರದ್ದುಪಡಿಸಲಾಗುವುದು.
12) ವೈಶಾಕ V/s ರಾಜಸ್ಥಾನದ ರಾಜ್ಯ ಸರ್ಕಾರದ ಮೊಕದ್ದಮೆಗೆ ಸಂಬಂಧಿಸಿದಂತೆ, ದಿನಾಂಕ 13.08.1997 ರ ಸರ್ವೋಚ್ಛ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ

ಸ್ಥಳಗಳಲ್ಲಿ, ಯಾವುದೇ ವ್ಯಕ್ತಿ/ವಿದ್ಯಾರ್ಥಿ, ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಯಾವುದೇ ವ್ಯಕ್ತಿಯಿಂದ (ಬೋಧಕ/ಬೋಧಕೇತರ/ಆಡಳಿತ ಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ, ಅಂತಹವರನ್ನು ಕೆಲಸದಿಂದ/ವಿದ್ಯಾರ್ಥಿ ದೆಸೆಯಿಂದ ವಿಮುಕ್ತಿಗೊಳಿಸ ಬಹುದಾಗಿದೆ. ಕಾಲೇಜು ಈ ರೀತಿಯ ಅಪರಾಧಗಳನ್ನು/ಚಟುವಟಿಕೆಗಳನ್ನು ಮಟ್ಟ ಹಾಕಲು ಸರ್ವೋಚ್ಛ ನ್ಯಾಯಾಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು. ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು.

13) ಕಾಲೇಜು, ಕೋರ್ಸುಗಳ ಶಿಕ್ಷಣ ಕ್ರಮವನ್ನು, ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು, ಸೇವೆಯಲ್ಲಿರುವ ಬೋಧಕರುಗಳನ್ನು ಪ್ರಾಂಶುಪಾಲರು/ಆಡಳಿತ ಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.

14) ವಿದ್ಯಾರ್ಥಿಗಳು ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ, ವಿದ್ಯಾರ್ಥಿಗಳಿಗೆ ತ್ವರಿತವಾಗಿ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.

15) ಕಾಲೇಜು ವಿದ್ಯಾರ್ಥಿಗಳ ಅಂಕಪಟ್ಟಿ, ಪದವಿ ಪ್ರಮಾಣ ಪತ್ರ ಹಾಗೂ ಇತರೇ ದಾಖಲೆಗಳನ್ನು ಮೂರು ತಿಂಗಳ ಅವಧಿಯೊಳಗೆ ವಿದ್ಯಾರ್ಥಿಗಳಿಗೆ ನೀಡಬೇಕು. ಅವಧಿ ಮೀರಿದ ನಂತರ ತಮ್ಮಲ್ಲಿಯೇ ಉಳಿದುಕೊಂಡಿರುವ ಅಂಕಪಟ್ಟಿಗಳು ಮತ್ತು ಪದವಿ ಪ್ರಮಾಣ ಪತ್ರಗಳ ಬಗ್ಗೆ ಕುಲಸಚಿವರು (ಮೌಲ್ಯಮಾಪನ) ಇವರಿಗೆ ವರದಿ ನೀಡತಕ್ಕದ್ದು.

16) ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರ್‌ನ ಪೂರ್ಣವಾಗದ ಅವಧಿಯ ಬೋಧನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.

17) ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

18) ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

19) 2025-26ನೇ ಸಾಲಿಗೆ ಸದರಿ ಕೋರ್ಸಿನ ಸಂಯೋಜನಾ ನವೀಕರಣಕ್ಕಾಗಿ ಅರ್ಜಿಯನ್ನು ತಪ್ಪದೇ ಸಲ್ಲಿಸತಕ್ಕದ್ದು.

20) ಐದು ವರ್ಷಗಳನ್ನು ಪೂರೈಸಿರುವ ಕಾಲೇಜುಗಳು ನ್ಯಾಕ್ (NAAC) ಅನುಮೋದನೆಯನ್ನು ಕೂಡಲೇ ಪಡೆದುಕೊಳ್ಳಕ್ಕದ್ದು.

21) ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ತಪ್ಪಿದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

ಆದೇಶದ ಮೇರೆಗೆ,

Digitally signed by
SHANTHALA K T
Date: 06-12-2025
16:29:10

ಕುಲಸಚಿವರು

ಗೆ,

**ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರುಗಳಿಗೆ,**

**ಪ್ರತಿಗಳು:**

1) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ, ಬಹುಮಹಡಿ ಕಟ್ಟಡ, ಬೆಂಗಳೂರು-01.
2) ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು-01.
3) ಕಾರ್ಯದರ್ಶಿಯವರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು.
4) ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-56.
5) ಉಪ ಕುಲಸಚಿರು, ಅಧೀಕ್ಷಕರು, ಶೈಕ್ಷಣಿಕ ವಿಭಾಗ-4, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-56.
6) ಉಪ ಕುಲಸಚಿರು, ಅಧೀಕ್ಷಕರು, ಸ್ನಾತಕೋತ್ತರ ಪರೀಕ್ಷಾ ವಿಭಾಗ, ಪರೀಕ್ಷಾಂಗ, ಬೆಂ.ವಿ.ಬೆಂ.
7) ಐ.ಟಿ. ಕೋಆರ್ಡಿನೇಟರ್, ಯು.ಯು.ಸಿ.ಎಂ.ಎಸ್., ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-56.
8) ಸಮನ್ವಯಾಧಿಕಾರಿ, ಅಂಕಿ ಅಂಶಗಳ ವಿಭಾಗ, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-56.